Akashvani: Bangalore
National Bulletin In Kannada
21.02.2025 : 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

21.02.2025 : 13.10hrs

**ಮುಖ್ಯಾಂಶಗಳು**

1. ದೇಶದಲ್ಲಿ ಶ್ರೇಷ್ಠ ನಾಯಕರನ್ನು ಬೆಳೆಸುವ ಸೋಲ್ ನಾಯಕತ್ವ ಸಮಾವೇಶ ಉದ್ಘಾಟಿಸಿದ ಪ್ರಧಾನಿ ನರೇಂದ್ರ ಮೋದಿ
2. ಆತಂಕ, ಖಿನ್ನತೆ ರೂಪದ ಮಾನಸಿಕ ತೊಂದರೆಗಳು ನಿರ್ಣಾಯಕ ವೈದ್ಯಕೀಯ ಸವಾಲುಗಳು - ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್
3. ವೈಯಕ್ತಿಕ ಆರೋಗ್ಯ ವೆಚ್ಚ ಶೇಕಡ ೩೯ಕ್ಕೆ ಇಳಿಕೆ - ಸಚಿವ ಜೆ.ಪಿ.ನಡ್ಡಾ
4. ಪ್ರಧಾನಿ ಅವರಿಂದ ದೆಹಲಿಯಲ್ಲಿಂದು ಸಂಜೆ ೯೮ನೇ ಅಖಿಲ ಭಾರತ ಮರಾಠಿ ಸಾಹಿತ್ಯ ಸಮ್ಮೇಳನಕ್ಕೆ ಚಾಲನೆ
5. ಐಸಿಸಿ ಚಾಂಪಿಯನ್ಸ್ ಟ್ರೋಫಿ; ಇಂದು ಮಧ್ಯಾಹ್ನ ಕರಾಚಿಯಲ್ಲಿ ಅಫ್ಘಾನಿಸ್ತಾನ-ದಕ್ಷಿಣ ಆಫ್ರಿಕಾ ಮುಖಾಮುಖಿ

*********

ಪ್ರಧಾನಮಂತ್ರಿ ನರೇಂದ್ರ ಮೋದಿ ನವದೆಹಲಿಯ ಭಾರತ ಮಂಟಪದಲ್ಲಿಂದು ಸ್ಕೂಲ್ ಆಫ್ ಅಲ್ಟಿಮೇಟ್ ಲೀಡರ್‌ಶಿಪ್- ಸೋಲ್ ನಾಯಕತ್ವ ಶೃಂಗಸಭೆಯ ಮೊದಲ ಆವೃತ್ತಿಯನ್ನು ಉದ್ಘಾಟಿಸಿದರು. ನಂತರ ಅವರು, ಇಂದು ದೇಶದ ಪ್ರತಿಯೊಬ್ಬ ವ್ಯಕ್ತಿಯು ವಿಕಸಿತ ಭಾರತ ಗುರಿ ಸಾಧನೆ ನಿಟ್ಟಿನಲ್ಲಿ ಶ್ರಮವಹಿಸಿ ದುಡಿಯುತ್ತಿದ್ದಾರೆ. ೨೧ನೇ ಶತಮಾನಕ್ಕೆ ಅಗತ್ಯವಾದ ಉತ್ಕೃಷ್ಟ ನಾಯಕತ್ವ ಬೆಳೆಸಲು ವಿಫುಲ ಅವಕಾಶವಿದೆ. ಈ ಸ್ಕೂಲ್ ಆಫ್ ಅಲ್ಟಿಮೇಟ್ ಲೀಡರ್‌ಶಿಪ್‌ನಿಂದ ಶ್ರೇಷ್ಠ ನಾಯಕರು ಹೊರ ಹೊಮ್ಮುವ ವಿಶ್ವಾಸವಿದೆ ಎಂದು ಹೇಳಿದರು.

**ಧ್ವನಿ: ಪ್ರಧಾನಮಂತ್ರಿ, ೨೨ ಸೆಕೆಂಡ್**

ಭಾರತ ಜಾಗತಿಕ ಶಕ್ತಿ ಕೇಂದ್ರವಾಗಿ ಉದಯವಾಗುತ್ತಿದೆ ಮತ್ತು ಅದಕ್ಕೆ ಪ್ರತಿಯೊಂದು ವಲಯದಲ್ಲೂ ಶಕ್ತಿಯುತ ನಾಯಕರ ಅಗತ್ಯವಿದೆ. ಜಾಗತಿಕ ಮಟ್ಟದಲ್ಲಿ ಸ್ಪರ್ಧೆ ಮಾಡಲು ವಿಶ್ವದರ್ಜೆಯ ನಾಯಕರು ಮತ್ತು ಅಂತಾರಾಷ್ಟ್ರೀಯ ನಾಯಕತ್ವ ಅಗತ್ಯವಿದೆ ಎಂದು ಪ್ರಧಾನಿ ಹೇಳಿದರು. ಭೂತಾನ್‌ನ ಪ್ರಧಾನಿ ದಾಶೋ ಶೆರಿಂಗ್ ಟೊಬ್ಗೇ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದರು. ಎರಡು ದಿನಗಳ ಸೋಲ್ ನಾಯಕತ್ವ ಶೃಂಗಸಭೆ ಒಂದು ಪ್ರಮುಖ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ. ಅಲ್ಲಿ ರಾಜಕೀಯ, ಕ್ರೀಡೆ, ಕಲೆ ಮತ್ತು ಮಾಧ್ಯಮ, ಆಧ್ಯಾತ್ಮಿಕ ಜಗತ್ತು, ಸಾರ್ವಜನಿಕ ನೀತಿ, ವ್ಯವಹಾರ ಮತ್ತು ಸಾಮಾಜಿಕ ವಲಯದಂತಹ ವೈವಿಧ್ಯಮಯ ಕ್ಷೇತ್ರಗಳ ನಾಯಕರು ತಮ್ಮ ಸ್ಫೂರ್ತಿದಾಯಕ ಜೀವನ ಪಯಣದ ಅನುಭವಗಳನ್ನು ಹಂಚಿಕೊಳ್ಳಲಿದ್ದಾರೆ. ಗುಜರಾತ್‌ನಲ್ಲಿ ಮುಂದಿನ ದಿನಗಳಲ್ಲಿ ಸ್ಥಾಪನೆಯಾಗಲಿರುವ ಸ್ಕೂಲ್ ಆಫ್ ಅಲ್ಟಿಮೇಟ್ ಲೀಡರ್‌ಶಿಪ್ ಸಂಸ್ಥೆ ತರಬೇತಿಯ ಮೂಲಕ ಭಾರತದಲ್ಲಿ ರಾಜಕೀಯ ನಾಯಕತ್ವದ ಬೆಳೆಸುವ ಗುರಿ ಹೊಂದಿದೆ.

*********

ಆತಂಕ ಮತ್ತು ಮಾನಸಿಕ ಖಿನ್ನತೆ ರೂಪದಲ್ಲಿ ಮಾನಸಿಕ ತೊಂದರೆಗಳು ನಿರ್ಣಾಯಕ ವೈದ್ಯಕೀಯ ಸವಾಲುಗಳಾಗಿ ಪರಿಣಮಿಸಿವೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಹೇಳಿದ್ದಾರೆ. ಅವರು ದೆಹಲಿಯಲ್ಲಿಂದು ಮೀಡಿಯೇಷನ್ ನಾಯಕರ ಜಾಗತಿಕ ಸಮಾವೇಶವನ್ನು ಉದ್ದೇಶಿಸಿ ಮಾತನಾಡಿ, ಮಾನಸಿಕ ಆರೋಗ್ಯ ವಿಚಾರದಲ್ಲಿ ಮಧ್ಯಸ್ಥಿಕೆ ಒಂದು ಆಶಾ ದೀಪವಾಗಿ ಹೊರಹೊಮ್ಮಿದೆ ಎಂದರು. ಈ ಸಮಾವೇಶ ವಿಶ್ವ ಸಂಸ್ಥೆಯ ಅಭಿವೃದ್ಧಿ ಗುರಿಗಳನ್ನು ಸಾಧಿಸಲು

ಪೂರಕವಾಗಿದೆ ಹಾಗೂ ಭಾರತದ ಪುರಾತನ ಪರಂಪರೆ ವಸುದೈವ ಕುಟುಂಬಕಂಅನ್ನು ಪ್ರತಿಬಿಂಬಿಸುತ್ತದೆ. ಭಾರತ ಐದು ಸಾವಿರಕ್ಕೂ ಅಧಿಕ ವರ್ಷಗಳ ನಾಗರಿಕತೆ ಮತ್ತು ಸಂಸ್ಕೃತಿಯನ್ನು ಹೊಂದಿದೆ ಎಂದು ಹೇಳಿದರು.

*********

ಕಳೆದ ೧೦ ವರ್ಷಗಳಲ್ಲಿ ವೈಯಕ್ತಿಕವಾಗಿ ಜೇಬಿನಿಂದ ಖರ್ಚಾಗುತ್ತಿದ್ದ ಆರೋಗ್ಯ ವೆಚ್ಚ ಶೇಕಡ ೬೪ ರಿಂದ ಶೇಕಡ ೩೯ಕ್ಕೆ ಇಳಿಕೆಯಾಗಿದೆ ಎಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ೧೨ನೇ ಆವೃತ್ತಿಯ ಅಂತಾರಾಷ್ಟ್ರಿಯ ಆರೋಗ್ಯ ಸಂವಾದ ೨೦೨೫ ಉದ್ದೇಶಿಸಿ ಮಾತನಾಡಿ, ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆ, ರಾಷ್ಟ್ರೀಯ ಆರೋಗ್ಯ ಮಿಷನ್ ಮತ್ತು ಇತರ ಆರೋಗ್ಯ ಸೇವೆಗಳ ಯೋಜನೆಯಿಂದಾಗಿ ಆರೋಗ್ಯ ವೆಚ್ಚ ಗಣನೀಯವಾಗಿ ತಗ್ಗಿದೆ ಎಂದರು. ೨೦೧೮ರಲ್ಲಿ ಆರಂಭಿಸಲಾದ ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆ ವ್ಯಾಪ್ತಿಗೆ ದೇಶದ ಶೇಕಡ ೪೦ರಷ್ಟು ಜನಸಂಖ್ಯೆ ಒಳಪಟ್ಟಿದ್ದು, ಅವರಿಗೆ ಸಮಗ್ರ ಆರೋಗ್ಯ ಸೇವೆಗಳನ್ನು ಒದಗಿಸಲಾಗುತ್ತಿದೆ ಎಂದು ಅವರು ಹೇಳಿದರು.

**ಧ್ವನಿ: ಜೆ.ಪಿ.ನಡ್ಡಾ, ೨೫ ಸೆಕೆಂಡ್**

*********

ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿಂದು ಸಂಜೆ ೯೮ನೇ ಅಖಿಲ ಭಾರತೀಯ ಮರಾಠಿ ಸಾಹಿತ್ಯ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ಮರಾಠಿ ಭಾಷೆಗೆ ಕೇಂದ್ರ ಸರ್ಕಾರ ಇತ್ತೀಚೆಗೆ ಶಾಸ್ತ್ರೀಯ ಭಾಷಾ ಸ್ಥಾನಮಾನವನ್ನು ನೀಡಿತು. ಮೂರು ದಿನಗಳ ಸಮ್ಮೇಳನವು ವೈವಿಧ್ಯಮಯ ಚರ್ಚೆಗಳು, ಪುಸ್ತಕ ಪ್ರದರ್ಶನಗಳು, ಸಾಂಸ್ಕೃತಿಕ ಪ್ರದರ್ಶನ ಮತ್ತು ಹೆಸರಾಂತ ಸಾಹಿತಿಗಳೊಂದಿಗೆ ಸಂವಾದಾತ್ಮಕ ಗೋಷ್ಠಿಗಳನ್ನು ಒಳಗೊಂಡಿದೆ. ಇದು ಮರಾಠಿ ಸಾಹಿತ್ಯದ ಕಾಲಾತೀತ ಪ್ರಸ್ತುತತೆಯನ್ನು ಆಚರಿಸುತ್ತದೆ ಮತ್ತು ಭಾಷಾ ಸಂರಕ್ಷಣೆ, ಅನುವಾದ ಮತ್ತು ಸಾಹಿತ್ಯ ಕೃತಿಗಳ ಮೇಲೆ ಡಿಜಿಟಲೀಕರಣದ ಪ್ರಭಾವ ಸೇರಿದಂತೆ ಸಮಕಾಲೀನ ಪ್ರಪಂಚದಲ್ಲಿ ಅದರ ಪಾತ್ರವನ್ನು ಅನ್ವೇಷಿಸುತ್ತದೆ. ೭೧ ವರ್ಷಗಳ ನಂತರ ರಾಷ್ಟ್ರ ರಾಜಧಾನಿಯಲ್ಲಿ ನಡೆಯುತ್ತಿರುವ ಮರಾಠಿ ಸಾಹಿತ್ಯ ಸಭೆಯು ಪುಣೆಯಿಂದ ದೆಹಲಿಗೆ ಸಾಂಕೇತಿಕ ಸಾಹಿತ್ಯ ರೈಲು ಪ್ರಯಾಣ ಸಹ ಒಳಗೊಂಡಿದೆ. ಈ ಕುರಿತು ನಮ್ಮ ಬಾತ್ಮೀದಾರರ ಹೆಚ್ಚಿನ ವಿವರ ನೀಡಿದ್ದಾರೆ.

**ಧ್ವನಿ: ಭಾವನಾ ಗೋಖ್ಲೆ, ೧೬ ಸೆಕೆಂಡ್**

*********

ದಿಢೀರ್ ಹೃದಯಾಘಾತದಿಂದ ಸಾವುಗಳು ಹೆಚ್ಚಾಗುತ್ತಿರುವ ಪ್ರಕರಣಗಳ ಹಿನ್ನೆಲೆಯಲ್ಲಿ ೯ನೇ ತರಗತಿ ಮೇಲ್ಪಟ್ಟ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಶಾಲಾ ಪಠ್ಯಕ್ರಮದಲ್ಲಿ ಮೂಲ ಜೀವ ಬೆಂಬಲ-ಬಿಎಲ್‌ಎಸ್ ತರಬೇತಿಯನ್ನು ಸೇರ್ಪಡೆ ಮಾಡಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ಪಂಜಾಬಿನ ರಾಜ್ಯಸಭಾ ಸದಸ್ಯ ಸಂತ ಬಲ್‌ಬೀರ್ ಸಿಂಗ್ ಅವರು, ಕಳೆದ ವರ್ಷ ಸಂಸತ್ತಿನಲ್ಲಿ ಈ ವಿಷಯಕ್ಕೆ ಒತ್ತು ನೀಡಿ, ಪ್ರಸ್ತಾಪಿಸಿದ್ದ ಹಿನ್ನೆಲೆಯಲ್ಲಿ ಸರ್ಕಾರ ಈ ಕ್ರಮಕ್ಕೆ ಮುಂದಾಗಿದೆ. ಕೇಂದ್ರ ಕೌಶಲ್ಯಾಭಿವೃದ್ಧಿ ಮತ್ತು ಶಿಕ್ಷಣ ಖಾತೆ ರಾಜ್ಯ ಸಚಿವ ಜಯಂತ್ ಚೌಧರಿ ಈ ಕುರಿತು ಸಂಸದ ಬಲ್‌ಬೀರ್ ಸಿಂಗ್‌ಗೆ ಪತ್ರ ಬರೆದಿದ್ದು, ೯ನೇ ತರಗತಿ ನಂತರದ ವಿದ್ಯಾರ್ಥಿಗಳು ಬಿಎಲ್‌ಎಸ್ ತರಬೇತಿ ಕಡ್ಡಾಯಗೊಳಿಸಲಾಗುವುದು. ಅದನ್ನು ದೈಹಿಕ ಶಿಕ್ಷಣ ಮತ್ತು ಸ್ವಾಸ್ಥ್ಯ ಪಠ್ಯಕ್ರಮದಲ್ಲಿ ಸೇರ್ಪಡೆ ಮಾಡಲಾಗುವುದು ಎಂದು ತಿಳಿಸಿದ್ದಾರೆ.

*********

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಇದೇ ೨೩ರ ಭಾನುವಾರ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೧೯ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಬಿತ್ತರಗೊಳ್ಳಲಿದೆ. ಅಲ್ಲದೇ, ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಯಲ್ಲಿ ಕಾರ್ಯಕ್ರಮ ಪ್ರಸಾರವಾಗಲಿದೆ. ಕಾರ್ಯಕ್ರಮಕ್ಕೆ ಸಾರ್ವಜನಿಕರು ಸಲಹೆ ಹಾಗೂ ಅಭಿಪ್ರಾಯಗಳನ್ನು ಕಳುಹಿಸಲು ಇಂದು ಕೊನೆಯ ದಿನವಾಗಿದೆ. ಆಸಕ್ತರು ಒಥಿ ಉov.iಟಿ ವೇದಿಕೆ ಮೂಲಕ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದಾಗಿದೆ.

*********

ಪಶ್ಚಿಮ ಏಷ್ಯಾ ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆ ಇಡೀ ಜಗತ್ತಿಗೆ ಅತ್ಯಗತ್ಯ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ದಕ್ಷಿಣ ಆಫ್ರಿಕಾದ ಜೋಹಾನ್ಸ್‌ಬರ್ಗ್‌ನಲ್ಲಿ ನಿನ್ನೆ ನಡೆದ ಜಿ-೨೦ ವಿದೇಶಾಂಗ ಸಚಿವರ ಸಭೆಯಲ್ಲಿ ಮಾತನಾಡಿದ ಅವರು, ಜಾಗತಿಕ ಕೊರತೆಗಳನ್ನು ನೀಗಿಸಲು ಹೆಚ್ಚಿನ ಬಹುಪಕ್ಷೀಯತೆಯ ಅಗತ್ಯವಿದೆ. ಭಿನ್ನಾಭಿಪ್ರಾಯಗಳು ವಿವಾದಗಳಾಗಬಾರದು, ವಿವಾದಗಳು ಸಂಘರ್ಷಗಳಾಗಬಾರದು ಮತ್ತು ಸಂಘರ್ಷಗಳು ಇನ್ನೂ ದೊಡ್ಡ ಪ್ರಮಾಣದ ಸಮಸ್ಯೆಗಳಿಗೆ ಕಾರಣವಾಗಬಾರದು ಎಂದು ಅವರು ತಿಳಿಸಿದರು. ಜಿ೨೦ ವಿದೇಶಾಂಗ ಸಚಿವರ ಸಭೆಯ ನೇಪಥ್ಯದಲ್ಲಿ ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ರಷ್ಯಾದ ಸಹವರ್ತಿ ಸೆರ್ಗೆಯ್ ಲಾವ್ರೊವ್ ಅವರನ್ನು ಭೇಟಿಯಾದರು. ಈ ವೇಳೆ ಭಾರತ-ರಷ್ಯಾ ದ್ವಿಪಕ್ಷೀಯ ಸಹಕಾರದ ಪ್ರಗತಿಯನ್ನು ಉಭಯ ನಾಯಕರು ಪರಿಶೀಲಿಸಿದರು. ಇದರ ಜೊತೆಗೆ ಡಾ.ಜೈಶಂಕರ್ ದಕ್ಷಿಣ ಆಫ್ರಿಕಾ ಅಧ್ಯಕ್ಷ ಸಿರಿಲ್ ರಾಮಫೋಸಾ ಅವರನ್ನು ಸಹ ಭೇಟಿಯಾದರು.

*********

ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಪಂದ್ಯಾವಳಿಯಲ್ಲಿ ಇಂದು ಪಾಕಿಸ್ತಾನದ ಕರಾಚಿಯ ರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿರುವ ಬಿ ಗುಂಪಿನ ಪಂದ್ಯದಲ್ಲಿ ಅಫ್ಘಾನಿಸ್ತಾನ ಹಾಗೂ ದಕ್ಷಿಣ ಆಫ್ರಿಕಾ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ಅಪರಾಹ್ನ ೨.೩೦ಕ್ಕೆ ಆರಂಭವಾಗಲಿದೆ. ನಿನ್ನೆ ನಡೆದ 'ಎ' ಗುಂಪಿನ ತನ್ನ ಮೊದಲ ಪಂದ್ಯದಲ್ಲಿ ಭಾರತ, ಬಾಂಗ್ಲಾದೇಶದ ವಿರುದ್ಧ ೬ ವಿಕೆಟ್‌ಗಳ ಗೆಲುವು ಸಾಧಿಸಿದೆ.

*****END***